ದಿಃ 27.02.2026

**ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ**

**ಹೊಳಲ್ಕೆರೆ.**

**ಸಿ.ಸಿ.1038/2020**

| | | | |
|---|---|---|---|
| ಸಾಕ್ಷಿಯ ಹೆಸರು | : | ರಾಜಪ್ಪ | ಪ್ರಾ.ಸಾಃ 7 |
| ತಂದೆಯ ಹೆಸರು | : | ನಿಂಗಪ್ಪ | ಚಾಸಾಃ 6 |
| ವಯಸ್ಸು | : | 68 ವರ್ಷ | |
| ಕೆಲಸ | : | ವ್ಯವಸಾಯ | ಸಾ ಪ್ರ ಬೋ |
| ವಾಸ | : | ಬಿದರಕೆರೆ ಗ್ರಾಮ | ದಿಃ 27.02.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

1. ಚಾಸಾ-7 ರವರು ಗೊತ್ತು. ಚಾಸಾ-5 ರವರು ಗೊತ್ತಿಲ್ಲ. ಸಾಕ್ಷಿ ನಿಪಿ-2 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ನಿಪಿ-2(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2012 ನೇ ಸಾಲಿನಲ್ಲಿ ಪೊಲೀಸರು ಮಹಜರನ್ನು ಮಾಡಲು ಬಂದಿದ್ದಾಗ ಮಾಡಿರುತ್ತೇನೆ. ಮಹಜರನ್ನು ಮಾಡಲು ಸ್ಥಳವನ್ನು ಯಾರು ತೋರಿಸಿದರು ಎಂದು ಗೊತ್ತಿಲ್ಲ. ಮಹಜರನ್ನು ಬೆಳಿಗ್ಗೆ 10.00 ಗಂಟೆಗೆ ಮಾಡಿದ್ದರು. ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲು-1 ನ್ನು ಈ ಹಿಂದೆ ನೋಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲು ಮಾನ್ಯ ಎ.ಪಿ.ಪಿ.ಯವರಿಂದಃ**

2. ದಿನಾಂಕ 06.08.2008 ರಂದು ಚಾಸಾ-8 ರವರ ಮನೆಯ ಬಳಿ ಚಾಸಾ-5 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-7 ರವರ ಸಮಕ್ಷಮ ಬೆಳಿಗ್ಗೆ 10.00 ರಿಂದ 10.45 ರವರೆಗೆ ಮಹಜರನ್ನು ಮಾಡಿರುತ್ತಾರೆ ಎಂದರೆ ಸಾಕ್ಷಿ ಪೊಲೀಸರು ಬಂದಿದ್ದರು ಮತ್ತು ಬೆಳಿಗ್ಗೆ 10.00 ಗಂಟೆಗೆ ಮಹಜರನ್ನು ಮಾಡಿದ್ದರು ಎಂದು, ಆಗ ನಾನು ಮತ್ತು ಚಾಸಾ-7 ರವರು ಇದ್ದು, ನಾನು ಸಹಿ ಮಾಡಿದ್ದೇನು ಎಂದು ಹೇಳುತ್ತಾರೆ.

ದಿಃ 27.02.2026

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ಆರ್.ಎಸ್ ವಕೀಲರಿಂದ</u>**

3.ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿಲ್ಲ ಎಂದರೆ ಸಾಕ್ಷಿ ನನಗೆ ಏನು ಗೊತ್ತಿಲ್ಲ ಎಂದು, ಆದರೆ ಸಹಿ ಮಾಡಿದ್ದೇನೆ ಎಂದು ಹೇಳುತ್ತಾರೆ. ಮಹಜರಿನಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಪ್ರಭಾರ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.